225

# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಜಿಎಂ\9020\2017\ಉನಿವಿ-4

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 24/04/2018

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ

**ವಿಷಯು:** ಸರ್ಕಾರಿ ನೌಕರರಾದ ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕ್ ಗುರುವಿನಹಳ್ಳಿ ಗ್ರಾಮ ಪಂಚಾಯತ್ 1) ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ.ನವಾಬ್ ಸಾಬ್ ನಧಾಫ್ (ಪ್ರಸ್ತುತ ಮತ್ತಿಘಟ್ಟಿ ಗ್ರಾಮ ಪಂಚಾಯತ್) ಮತ್ತು 2) ಅಧ್ಯಕ್ಷರಾದ ಶ್ರೀಮತಿ.ಜುಲೇಖಾ ಭೀ ಹುಬ್ಬಳ್ಳಿ ರವರ ಹಣ ದುರುಪಯೋಗದ ಬಗ್ಗೆ.

**********

ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕ್ ಗುರುವಿನಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ.ಅಡವಯ್ಯ ಬಿನ್ ಪರ್ವತಯ್ಯ ಕುಬಿಹಾಳಮಠ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕ್ ಗುರುವಿನಹಳ್ಳಿ ಗ್ರಾಮ ಪಂಚಾಯತ್ 1) ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ.ನವಾಬ್ ಸಾಬ್ ನಧಾಫ್ (ಪ್ರಸ್ತುತ ಮತ್ತಿಘಟ್ಟಿ ಗ್ರಾಮ ಪಂಚಾಯತ್) ಮತ್ತು 2) ಅಧ್ಯಕ್ಷರಾದ ಶ್ರೀಮತಿ.ಜುಲೇಖಾ ಭೀ ಹುಬ್ಬಳ್ಳಿ (ಇನ್ನು ಮುಂದೆ '1 ಮತ್ತು 2ನೇ ಎದುರುದಾರರು' ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರ ವಿರುದ್ಧ ಹಣ ದುರುಪಯೋಗದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಗುರುವಿನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 2016-17ನೇ ಸಾಲಿನ ಎಂಜಿಎನ್ಆರ್ಇಜಿಎ ಯೋಜನೆಯಡಿ, 1) ಗುರುವಿನಹಳ್ಳಿ ಗ್ರಾಮದ ಶಾಲಾ ನಡುವಿನ ರಸ್ತೆಯಿಂದ ಶ್ರೀ.ಆಡಿವಯ್ಯ ರವರ ಮನೆವರೆಗಿನ ರಸ್ತೆ ದುರಸ್ತಿ; 2) ಗುರುವಿನಹಳ್ಳಿ ಗ್ರಾಮದ ಹಳೇ ಎಸ್‌ಟಿ ಓಣಿಯಿಂದ ಮುಖ್ಯ ರಸ್ತೆವರೆಗೆ ಕಾಂಕ್ರೀಟ್ ರಸ್ತೆ ನಿರ್ಮಾಣ; 3)ಗುರುವಿನಹಳ್ಳಿ ಗ್ರಾಮದ ಶಾಲಾ ಮೈದಾನ ಸಮತಟ್ಟು ಮಾಡುವುದು; 4) ಗುರುವಿನಹಳ್ಳಿ ಗ್ರಾಮದ ಹಳೇ ಎಸ್‌ಸಿ ಓಣಿಗಳಲ್ಲಿ ಪಕ್ಕಾ ಗಟಾರ ನಿರ್ಮಾಣ ಕಾಮಗಾರಿಗಳನ್ನು ಸಂಪೂರ್ಣವಾಗಿ ನಿರ್ವಹಣೆ ಮಾಡದೇ ಎದುರುದಾರರು ಹಣ ಬಿಡುಗಡೆ ಮಾಡಿಸಿಕೊಂಡು ಹಣ ದುರುಪಯೋಗ ಪಡಿಸಿಕೊಂಡಿರುವುದಾಗಿ ಹೇಳಿದ್ದಾರೆ.

N. Anand

226

3. ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, 1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಗಳಲ್ಲಿ –

ದೂರುದಾರರು ಸಲ್ಲಿಸಿದ ದೂರು ಸತ್ಯಕ್ಕೆ ದೂರವಾಗಿದೆ. ದೂರಿನಲ್ಲಿ ಹೇಳಿದಂತಹ ಕಾಮಗಾರಿಗಳನ್ನು ಎಂಜಿಎನ್‌ಆರ್‌ಇಜಿಎ ಯೋಜನೆಯ ನಿಯಮಗಳಂತೆ ಆಧ್ಯತೆ ಮೇರೆಗೆ ಕೈಗೊಂಡು ಕಾಮಗಾರಿ ಮಾಡಿದ್ದು ನಿಜವಿದೆಯೆಂದು ಹೇಳಿದ್ದಾರೆ.

4. ಆಕ್ಷೇಪಣೆಗಳಿಗೆ ದೂುದಾರರಿಂದ ಉತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ –

ಕಾಮಗಾರಿಯ ಗುಣಮಟ್ಟ \ ಅಳತೆ ಕುರಿತಾಗಿ ಸತ್ಯಾಸತ್ಯತೆಯನ್ನು ಪರಿಶೀಲಿಸ ಬೇಕಿದೆ. ಸಾಮಗ್ರಿಗಳ ಪೂರೈಕೆದಾರರು \ ಗುತ್ತಿಗೆದಾರರು \ ಅಧಿಕಾರಿಗಳು ಸೃಷ್ಟಿಸಿಕೊಂಡು ತಯಾರಿಸಲಾದ ಅಂಕಿ–ಅಂಶಗಳಿಗೆ ಸಂಬಂಧಪಟ್ಟಂತೆ ಕಾಮಗಾರಿಗಳು ನಡೆದಿಲ್ಲವೆಂದು ಹೇಳಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

1) ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕ್ ಗುರುವಿನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 2016–17ನೇ ಸಾಲಿನ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳನ್ನು ನಿರ್ವಹಿಸಿದೆಯೆಂದು ಹೇಳಿದೆ –

1) ಗುರುವಿನಹಳ್ಳಿ ಗ್ರಾಮದ ಶಾಲಾ ನಡುವಿನ ರಸ್ತೆಯಿಂದ ಶ್ರೀ.ಆಡಿವಯ್ಯ ರವರ ಮನೆವರೆಗಿನ ರಸ್ತೆ ದುರಸ್ತಿ;

2) ಗುರುವಿನಹಳ್ಳಿ ಗ್ರಾಮದ ಹಳೇ ಎಸ್‌ಟಿ ಓಣಿಯಿಂದ ಮುಖ್ಯ ರಸ್ತೆವರೆಗೆ ಕಾಂಕ್ರೀಟ್ ರಸ್ತೆ ನಿರ್ಮಾಣ;

3)ಗುರುವಿನಹಳ್ಳಿ ಗ್ರಾಮದ ಶಾಲಾ ಮೈದಾನ ಸಮತಟ್ಟು ಮಾಡುವುದು;

4) ಗುರುವಿನಹಳ್ಳಿ ಗ್ರಾಮದ ಹಳೇ ಎಸ್‌ಸಿ ಓಣಿಗಳಲ್ಲಿ ಪಕ್ಕಾ ಗಟಾರ ನಿರ್ಮಾಣ.

2) ಸದರಿ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಇರುವ ನಾಲ್ಕು ಕಡತಗಳಲ್ಲಿ, ಕಾಮಗಾರಿ ಪ್ರಾರಂಭಿಸಲು ಅನುಮೋದನೆ, ಅಂದಾಜು ಪಟ್ಟಿ, ಅಕುಶಲ ಕೆಲಸಕ್ಕಾಗಿ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ ಸಲ್ಲಿಸಲಾದ ಅರ್ಜಿ, ಕೆಲಸಕ್ಕೆ ವರದಿ ಮಾಡಿಕೊಳ್ಳುವುದಕ್ಕಾಗಿ ನೀಡಿದ ನೋಟೀಸ್, ಸಾಮಗ್ರಿ ಖರೀದಿ ಬಗ್ಗೆ ಕರೆದ ಕೊಟೇಷನ್ ವಿವರ, ತುಲನಾತ್ಮಕ ದರಪಟ್ಟಿ, ಸರಬರಾಜು ಆದೇಶ, ಮಸ್ಟರ್ ರೋಲಿನ ಪ್ರತಿ, ಸಾಮಗ್ರಿ ಖರೀದಿ ಬಾಬ್ತು ಬಿಲ್, ಅಳತೆ ಪುಸ್ತಕ, ಭಾವಚಿತ್ರ ಇತರೆ ದಾಖಲೆಗಳು ಕಂಡು ಬಂದಿದೆ;

N. Ananda

B4m/9020/17

(227)



3) ಎಂಜಿಎನ್‌ಆರ್‌ಇಜಿಎ ಮಾರ್ಗಸೂಚಿಗಳನ್ವಯ ಮಸ್ಟರ್ ರೋಲಿನಲ್ಲಿ ಕಾಣಿಸಲಾದ ಮತ್ತು ಸದರಿ ಕಾರ್ಯನಿರ್ವಹಿಸಿದ್ದಾರೆಂದು ಹೇಳಿದ ಕಾರ್ಮಿಕರು ಜಾಬ್ ಕಾರ್ಡ್ ಹೊಂದಿರುವ ಬಗ್ಗೆ ಸದರಿ ಜಾಬ್ ಕಾರ್ಡ್ ಪ್ರತಿಗಳು ಲಭ್ಯವಿಲ್ಲ. ಸದರಿ ಜಾಬ್ ಕಾರ್ಡ್ ಹೊಂದಿರುವ ಕಾರ್ಮಿಕರೇ ಕಾಮಗಾರಿಗಳನ್ನು ನಿರ್ವಹಿಸಿದ ಬಾಬ್ತು ಕೂಲಿ ಹಣ ಅವರ ಖಾತೆಗೆ ಜಮಾ ಆಗಿದೆಯೇ ಎಂಬ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾಮಗಾರಿಗಳನ್ನು ನಿರ್ವಹಿಸಿದ ಕಾರ್ಮಿಕರೆಲ್ಲರೂ ಉದ್ಯೋಗ ಕೋರಿ ಎದುರುದಾರರಿಗೆ ಅರ್ಜಿ ಸಲ್ಲಿಸಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾರ್ಮಿಕರು ಬ್ಯಾಂಕ್‌ನಲ್ಲಿ ಖಾತೆ ಹೊಂದಿರುವ ಬಗ್ಗೆ ಪಾಸ್ ಪುಸ್ತಕ ಅಥವಾ ಖಾತೆಯ ಉದ್ಧೃತ ಭಾಗವಿಲ್ಲ. ಕೆಎಫ್‌ಸಿ ಪರಿಚ್ಛೇದ 57ರ ಪ್ರಕಾರ ಪ್ರತಿಯೊಂದು ಖರ್ಚಿನ ಬಗ್ಗೆ ವೋಚರ್‌ಗಳು ಮತ್ತು ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರಬೇಕಾಗಿದೆ. ಅದೇ ರೀತಿ, ಕೆಎಫ್‌ಸಿ ಪರಿಚ್ಛೇದ 17ರ ಪ್ರಕಾರ ಅಗತ್ಯವಿರುವ ಸರಕು ಸಾಮಗ್ರಿಗಳನ್ನು ಮಾರುಕಟ್ಟೆಯಲ್ಲಿ ಖರೀದಿಸುವ ಸಾಧಿಲ್ವಾರು ವೆಚ್ಚದ ಕೈಪಿಡಿ 1958, ನಿಯಮಗಳ ನಿಯಮ 55 (49)(ಎ)ರಲ್ಲಿನ ₹500/-ಗಳ ಮಿತಿಯನ್ನು ₹5,000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ. ₹5,000/- ಮೀರಿದ ₹1,00,000/-ದವರೆಗಿನ ಖರೀದಿಗಳನ್ನು ಸ್ಪರ್ಧಾತ್ಮಕ ಕೊಟೇಷನ್ ಕರೆಯುವ ಮೂಲಕ ಕರೆಯತಕ್ಕದ್ದು, ₹1 ಲಕ್ಷ ಮೀರಿದ ಖರೀದಿಗೆ ಕೆಟಿಪಿಪಿ ಕಾಯಿದೆ ಅನ್ವಯವಾಗುತ್ತದೆ. ಆದರೆ, ಎದುರುದಾರರು ಈ ಎಲ್ಲಾ ಕಾನೂನಿನ ಅಂಶಗಳನ್ನು ಅನುಸರಿಸದೇ, ಈ ಎಲ್ಲಾ ಕಾಮಗಾರಿಗಳ ನಿಯಮಾನುಸಾರ ಕೊಟೇಷನ್ ಪಡೆದು ಅತ್ಯಂತ ಕಡಿಮೆ ದರ ನಮೂದಿಸಿರುವ ಗುತ್ತಿಗೆದಾರರಿಗೆ ಹಾಗೂ ಸರಬರಾಜುದಾರರಿಗೆ ಕಛೇರಿ ಆದೇಶ ನೀಡಿ ಚೆಕ್ ಮೂಲಕ ಹಣ ಪಾವತಿಸಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಕಾರಣ, ದೂರುದಾರರು ಹೇಳುವಂತೆ ಸದರಿ ಕಾಮಗಾರಿಗಳಲ್ಲಿ ಎದುರುದಾರರು ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

7. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

N. Anand

8. ಎರಡನೇ ಎದುರುದಾರರು ಗ್ರಾಮ ಪಂಚಾಯತ್ ಅಧ್ಯಕ್ಷರಾಗಿರುವುದರಿಂದ, ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಅಡಿ ಸಕ್ಷಮ ಪ್ರಾಧಿಕಾರವು ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ.

9. ಅದಲ್ಲದೆ, 1ನೇ ಎದುರದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಎದುರದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸ ಬೇಕೆಂದೂ ಕೋರಿದೆ.

10. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

(ನ್ಯಾಯಾಮೂರ್ತಿ ಎನ್.ಆನಂದ)
ಉಪಲೋಕಾಯುಕ್ತ,
ಕರ್ನಾಟಕ ರಾಜ್ಯ.